ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತೆರಡನೆಯ ಅಧಿವೇಶನ
ಬುಧವಾರ, ದಿನಾಂಕ: 09ನೇ ಡಿಸೆಂಬರ್, 2020

ಹುಡ್ಕೋದಿಂದ ಪಡೆದ ಸಾಲ ಮನ್ನಾ ಮಾಡುವ ಬಗ್ಗೆ

ಶ್ರೀ ಬಿ.ಜಿ.ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

252 (202) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಹುಡ್ಕೋದಿಂದ ಸಾಲ ಪಡೆದು ವಸತಿ ರಹಿತರಿಗೆ ವಸತಿ ನೀಡಿದ

ಗ್ರಾಮ ಪಂಚಾಯಿತಿಗಳ ಸಂಖ್ಯೆ ಎಷ್ಟು; ಅವುಗಳಲ್ಲಿ ನಿರ್ಮಿಸಲಾದ ಮನೆಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು, ತಾಲ್ಲೂಕುವಾರು, ವರ್ಷವಾರು, ಗ್ರಾಮ ಪಂಚಾಯಿತಿವಾರು ಮಾಹಿತಿ ಒದಗಿಸುವುದು)

(ಆ) ಸರ್ಕಾರದ ಸಾಲ ಮತ್ತು ಬಡ್ಡಿ ಮನ್ನಾ ಯೋಜನೆಯಡಿ ಈ ಮನೆಗಳ ಮೇಲಿನ ಸಾಲ ಮತ್ತು ಬಡ್ಡಿ ಮನ್ನಾ ಮಾಡಲಾಗಿದೆಯೇ? (ವಿವರ ನೀಡುವುದು)